# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 719 |
| ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಮಕ್ಕಳಿಗೆ ಶಾಲಾ ಸಮವಸ್ತ್ರ ಮತ್ತು ಶೂ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಶೂ ಮತ್ತು ಸಾಕ್ಸ್**<br>• ಸರ್ಕಾರದ ಆದೇಶ ಸಂಖ್ಯೆ:ಇಪಿ 47 ಎಂಪಿಇ 2021 ಬೆಂಗಳೂರು ದಿನಾಂಕ:12.08.2022ರ ಆದೇಶದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದಲ್ಲಿ 01 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್ ಖರೀದಿ ಸಂಬಂಧ ರೂ.132.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಅದರಲ್ಲಿ ಒಟ್ಟು 46.37 ಲಕ್ಷ ವಿದ್ಯಾರ್ಥಿಗಳಿಗೆ ಒಟ್ಟು 127.26 ಕೋಟಿಗಳನ್ನು ಅನುದಾನವನ್ನು ಸಂಬಂಧಿಸಿದ ಎಸ್.ಡಿ.ಎಂ.ಸಿ ಖಾತೆಗಳಿಗೆ ಬಿಡುಗಡೆ ಮಾಡಲಾಗಿದೆ.<br>**ಸಮವಸ್ತ್ರ**<br>• ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಮಕ್ಕಳಿಗೆ ಶಾಲಾ ಸಮವಸ್ತ್ರ ವಿತರಣೆ ಮಾಡಲಾಗಿದೆ. |
| ಆ) | ಸಕಾಲಕ್ಕೆ ಸಮವಸ್ತ್ರ ವಿತರಣೆ ಮಾಡದ ಕಾರಣ ಮಕ್ಕಳು ಹಿಂದಿನ ವರ್ಷಗಳಲ್ಲಿ ನೀಡಲಾಗಿದ್ದ ಸಮವಸ್ತ್ರವನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2022-23ನೇ ಸಾಲಿಗೆ ಸಕಾಲಕ್ಕೆ ಸಮವಸ್ತ್ರ ಸರಬರಾಜು ಮಾಡಲು ಇಲಾಖೆಯಿಂದ ಕ್ರಮವಹಿಸಲಾಗಿದ್ದರೂ ಟೆಂಡರ್ ದರಗಳು ನಿಗಧಿಪಡಿಸಿದ್ದಕ್ಕಿಂತ ಹೆಚ್ಚಾಗಿದ್ದರಿಂದ ಸರ್ಕಾರಕ್ಕೆ ಆರ್ಥಿಕ ಹೊರೆಯಾದ ಕಾರಣ ಪುನ: ಟೆಂಡರ್ ಕರೆದು ಪರಿಶೀಲಿಸಿ ರಾಜ್ಯದ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ ಸಮವಸ್ತ್ರ ಸರಬರಾಜಿಗೆ ಕ್ರಮವಹಿಸಲಾಗಿದ್ದು, ಪ್ರಸ್ತುತ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಸಮವಸ್ತ್ರ ಸರಬರಾಜು ಪೂರ್ಣಗೊಂಡಿರುತ್ತದೆ. |
| ಇ) | ಬಂದಿದ್ದಲ್ಲಿ, ಕೂಡಲೇ ಸಮವಸ್ತ್ರ ವಿತರಿಸಲು ಕ್ರಮ ಕೈಗೊಳ್ಳಲಾಗುವುದೇ; | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಮವಸ್ತ್ರ ವಿತರಣೆ ಪೂರ್ಣಗೊಂಡಿರುತ್ತದೆ. |
| ಈ) | ರಾಜ್ಯಾದ್ಯಂತ ಪ್ರೌಢಶಾಲಾ ಮಕ್ಕಳಿಗೆ ಕಳೆದ ಮೂರು ವರ್ಷಗಳಿಂದ ಸೈಕಲ್ ವಿತರಣೆ ಮಾಡದಿರಲು ಕಾರಣಗಳೇನು; | **ಬೈಸಿಕಲ್:-**<br>2019-20ನೇ ಸಾಲಿನಲ್ಲಿ ಬೈಸಿಕಲ್‌ಗಳನ್ನು ವಿತರಿಸಲಾಗಿದೆ.<br>2020-21, 2021-22ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಹಾಗೂ ಭೌತಿಕ ತರಗತಿಗಳು ಪ್ರಾರಂಭವಾಗದ ಕಾರಣ ಬೈಸಿಕಲ್‌ಗಳನ್ನು ವಿತರಿಸಲಾಗಿರುವುದಿಲ್ಲ. |

| | | |
|---|---|---|
| ಉ) | ಆರ್ಥಿಕ ನೆಪವೊಡ್ಡಿ ಯೋಜನೆಯನ್ನು ಸ್ಥಗಿತಗೊಳಿಸಿರುವುದು ನಿಜವೇ; | 2022-23ನೇ ಸಾಲಿನಲ್ಲಿ ಉಚಿತ ಬೈಸಿಕಲ್ ಯೋಜನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಸದರಿ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿರುತ್ತದೆ. |
| ಊ) | ಇದರಿಂದ ಗ್ರಾಮೀಣ ಭಾಗದ ಮಕ್ಕಳಿಗೆ ಅನಾನುಕೂಲವಾಗಿರುವುದನ್ನು ಸರ್ಕಾರ ಮನಗಂಡಿದೆಯೇ; | ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಾಲೆಗೆ ತಲುಪಲು ಉಚಿತ ಬಸ್ ಪಾಸ್ ವಿತರಣೆ ಯೋಜನೆ ಜಾರಿಯಲ್ಲಿದೆ. |
| ಋ) | ಮನಗಂಡಿದ್ದಲ್ಲಿ, ಕೂಡಲೇ ಹಣ ಬಿಡುಗಡೆಗೊಳಿಸಿ ಸೈಕಲ್ ವಿತರಣೆಗೆ ಸರ್ಕಾರ ಮುಂದಾಗುವುದು ಯಾವಾಗ? | 2022-23ನೇ ಸಾಲಿನಲ್ಲಿ ಉಚಿತ ಬೈಸಿಕಲ್ ಯೋಜನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಸದರಿ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿರುತ್ತದೆ. |

**ಇಪಿ 112 ಎಂಪಿ ಇ 2022**

**(ಬಿ.ಸಿ ನಾಗೇಶ್)**
**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**
**ಸಕಾಲ ಸಚಿವರು.**